10

ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 12 ಇಎನ್‌ಕ್ಯೂ 2009

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 12.08.2013

## ಸುತ್ತೋಲೆ

ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ರ ನಿಯಮ 9ರ ಅಡಿಯಲ್ಲಿ ಸರ್ಕಾರಿ ನೌಕರರು/ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲು ಸಂಬಂಧಪಟ್ಟ "ಶಿಸ್ತು ಪ್ರಾಧಿಕಾರಗಳ"ರ ಬಗ್ಗೆ ವಿಶದಪಡಿಸಲಾಗಿದೆ. ಗುಂಪು-ಎ (ಹಿರಿಯ ಶ್ರೇಣಿ) ಸೇರಿದಂತೆ ಶಿಸ್ತು ಕ್ರಮ ಜರುಗಿಸಲು ಅಧಿಕಾರ ಪ್ರತ್ಯಾಯೋಜನೆ ಹೊರಡಿಸಿರುವ ಪ್ರಕರಣಗಳನ್ನು ಹೊರತುಪಡಿಸಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದೆ.

2. ಆದಾಗ್ಯೂ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸೇವೆಗೆ ಸೇರಿದ ಕೆಲವು ಗುಂಪು-ಎ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಜಿಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ಹಂತದಲ್ಲಿಯೇ ದೋಷಾರೋಪಣೆ ಪಟ್ಟಿಗಳನ್ನು ಜಾರಿ ಮಾಡುವ ಮೂಲಕ ಕ್ರಮವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ರೀತಿ ಸಕ್ಷಮ ಪ್ರಾಧಿಕಾರವಲ್ಲದ ಪ್ರಾಧಿಕಾರವು ಶಿಸ್ತು ಕ್ರಮ ಜರುಗಿಸಿದಲ್ಲಿ ಅನಾವಶ್ಯಕವಾಗಿ ಆಡಳಿತಾತ್ಮಕ ಹಾಗೂ ಕಾನೂನು ಸಮಸ್ಯೆ ಉದ್ಭವವಾಗುತ್ತದೆ. ಇಂತಹ ಹಲವಾರು ಪ್ರಕರಣಗಳಲ್ಲಿ ಆಪಾದಿತ ಅಧಿಕಾರಿ / ನೌಕರರು ನ್ಯಾಯಾಲಯದ ಮೊರೆ ಹೊಕ್ಕಿರುವ ಸಂದರ್ಭಗಳೂ ಸಹ ಇರುತ್ತವೆ.

3. ಅಲ್ಲದೆ, ಕೆಲವು ಪ್ರಕರಣಗಳಲ್ಲಿ ಶಿಸ್ತು ಕ್ರಮ ಜರುಗಿಸುವಾಗ ಸಂಬಂಧಪಡದ ಪ್ರಾಧಿಕಾರಗಳು ದೋಷಾರೋಪಣ ಪಟ್ಟಿಗಳನ್ನು ಹೊರಡಿಸಿರುವುದನ್ನು ಸರ್ಕಾರವು ಗಮನಿಸಿ ಅವುಗಳನ್ನು ಹಿಂಪಡೆದು ಸೂಕ್ತ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಕಳುಹಿಸಬೇಕೆಂದು ಕೋರಿದ್ದರೂ ಸಹ ನಿಗದಿತ ಸಮಯದಲ್ಲಿ ಪ್ರಸ್ತಾವನೆ ಬಾರದಿರುವುದು ಹಾಗೂ ಅನೇಕ ವೇಳೆ ಪ್ರಸ್ತಾವನೆಯನ್ನು ಕಳುಹಿಸದಿರುವುದನ್ನು ಸರ್ಕಾರವು ಗಮನಿಸಿದೆ. ಇದರಿಂದಾಗಿ ಆಪಾದಿತ ನೌಕರರ ವಿರುದ್ಧ ಸೂಕ್ತ ಸಮಯದಲ್ಲಿ ಶಿಸ್ತು ಕ್ರಮ ಜರುಗಿಸಲು ಸಾಧ್ಯವಾಗದೆ ಪರೋಕ್ಷವಾಗಿ ಆಪಾದಿತರ ನೆರವಿಗೆ ಬಂದಂತಾಗಿದೆ.

4. ಆದುದರಿಂದ ಜಿಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಇಲಾಖಾ ಮುಖ್ಯಸ್ಥರು ಕಟ್ಟುನಿಟ್ಟಾಗಿ ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957ನ್ನು ಹಾಗೂ ಸರ್ಕಾರವು ಶಿಸ್ತು ಪ್ರಾಧಿಕಾರ ಕುರಿತಂತೆ ಕಾಲಕಾಲಕ್ಕೆ ಹೊರಡಿಸಿರುವ ಸೂಚನೆಗಳನ್ನು ಚಾಚೂ ತಪ್ಪದೆ ಪಾಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ. ಯಾವುದೇ ಕಾರಣಕ್ಕೂ ಸಕ್ಷಮ ಪ್ರಾಧಿಕಾರವಲ್ಲದ ಪ್ರಾಧಿಕಾರವು ಶಿಸ್ತು ಕ್ರಮ ಜರುಗಿಸಲು ಕ್ರಮವಹಿಸಬಾರದು ಹಾಗೂ ಆ ಕುರಿತಂತೆ ಸಕ್ಷಮ ಪ್ರಾಧಿಕಾರಕ್ಕೆ ಶಿಸ್ತು ಕ್ರಮ ಜರುಗಿಸುವ ಕುರಿತು ಸಂಬಂಧಪಟ್ಟ ದಾಖಲೆಗಳೊಂದಿಗೆ ಕರಡು ದೋಷಾರೋಪಣ ಪಟ್ಟಿಗಳ ಸಮೇತ

ಪ್ರಸ್ತಾವನೆಯನ್ನು ಕಳುಹಿಸಿ ಸೂಕ್ತ ಸಮಯದಲ್ಲಿ ಶಿಸ್ತು ಕ್ರಮ ತೆಗೆದುಕೊಳ್ಳಲು ಕ್ರಮವಹಿಸಬೇಕೆಂದು ತಿಳಿಸಲಾಗಿದೆ.

5. ಮುಂದುವರೆದು, ಜಿಲ್ಲಾ ಜಿಲ್ಲಾಧಿಕಾರಿಗಳು / ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಇಲಾಖಾ ಮುಖ್ಯಸ್ಥರು ಶಿಸ್ತು ಕ್ರಮ ಜರುಗಿಸಲು ಸಕ್ಷಮ ಪ್ರಾಧಿಕಾರಗಳಲ್ಲದಿದ್ದರೂ ಸಹ ದೋಷಾರೋಪಣ ಪಟ್ಟಿಗಳನ್ನು ಅವರ ಹಂತದಲ್ಲಿ ಈಗಾಗಲೇ ಜಾರಿ ಮಾಡಿರುವ ಪ್ರಕರಣಗಳಲ್ಲಿ ಸದರಿ ಕ್ರಮವನ್ನು ನಿಯಮಬಾಹಿರವೆಂದು ಪರಿಗಣಿಸಿ ಆ ಕ್ರಮವನ್ನು ರದ್ದುಪಡಿಸಲಾಗಿದೆ ಎಂಬುದಾಗಿ ಪರಿಭಾವಿಸಿ ನಿಯಮಾನುಸಾರ ಮುಂದಿನ ಕ್ರಮವಹಿಸಲಾಗುವುದು ಎಂದೂ ಸಹ ಈ ಮೂಲಕ ತಿಳಿಯಪಡಿಸಿದೆ.

6. ಮೇಲಿನ ಸೂಚನೆಗಳನ್ನು ಕಟ್ಟುನಿಟಾಗಿ ಪಾಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

(ಹೆಚ್.ಸಿ.ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
2) ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
3) ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
4) ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
5) ನಿರ್ದೇಶಕರು, ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
6) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವಾಲಯದ ಎಲ್ಲಾ ನಿರ್ದೇಶಕರು.
7) ಗ್ರಾ.ಅ.ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್) / ಅಪರ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ-2) ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
8) ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರಿಗೆ ವೆಬ್ ಸೈಟ್ ನಲ್ಲಿ ಪ್ರಕಟಿಸುವ ಸಲುವಾಗಿ.
9) ರಕ್ಷಾ ಕಡತ / ಕಂಪ್ಯೂಟರ್ ಸೆಲ್ / ಹೆಚ್ಚುವರಿ ಪ್ರತಿ.